ಸರಕಾರಿ ಪ್ರಥಮ ದರ್ಜೆ ಕಾಲೇಜು

496 (606) ಶ್ರೀ ಐಹೊಳೆ ಡಿ. ಮಹಾಲಿಂಗಪ್ಪ (ರಾಯಭಾಗ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಪ್ರಸಕ್ತ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಹೊಸದಾಗಿ ಎಷ್ಟು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ಪ್ರಾರಂಭಿಸಲು ಸರ್ಕಾರ ಮಂಜೂರಾತಿ ನೀಡಿದೆ(ವಿವರ ಒದಗಿಸುವುದು);

ಆ) ಬೆಳಗಾವಿ ಜಿಲ್ಲೆ ಚಿಕ್ಕೋಡಿ ತಾಲ್ಲೂಕಿನ ಮಜಲಹಟ್ಟಿ ಗ್ರಾಮದಲ್ಲಿ ನೂತನವಾಗಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮಂಜೂರಾತಿ ಪ್ರಸ್ತಾವನೆ ಯಾವ ಹಂತದಲ್ಲಿದೆ (ವಿವರ ಒದಗಿಸುವುದು)?

ಶ್ರೀ ಸಿ.ಟಿ. ರವಿ (ಉನ್ನತ ಶಿಕ್ಷಣ ಸಚಿವರು) :

ಅ) ಇಲ್ಲ.

ಆ) ಮಜಲಹಟ್ಟಿ ಗ್ರಾಮದಲ್ಲಿ ನೂತನವಾಗಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜನ್ನು ಪ್ರಾರಂಭಿಸುವ ಬಗ್ಗೆ ಆರ್ಥಿಕ ಇಲಾಖೆಯನ್ನು ಸಂಪರ್ಕಿಸಲಾಗಿತ್ತು. ಅನುದಾನದ ಬೇಡಿಕೆ ವಿವರವನ್ನು ನೀಡುವಂತೆ ತಿಳಿಸಿತ್ತು. ಅಲ್ಲದೆ ಈ ಹಿಂದೆ ಅತೀ ಕಡಿಮೆ ವಿದ್ಯಾರ್ಥಿಗಳ ಸಂಖ್ಯೆ ಇರುವ ಕಾಲೇಜುಗಳನ್ನು ಸ್ಥಳಾಂತರಿಸಲು ತಿಳಿಸಿದೆ. ಮುಂದಿನ ದಿನಗಳ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗುವ ಸಂಭವವಿರುವುದರಿಂದ ಸ್ಥಳಾಂತರಿಸುವ ಪ್ರಸ್ತಾವನೆ ಈಗ ಸರ್ಕಾರದ ಮುಂದಿಲ್ಲ. ವರ್ಷದ ಮಧ್ಯಂತರ ಅವಧಿಯಾಗಿರುವುದರಿಂದ ಈ ಸಾಲಿನಲ್ಲಿ ಪ್ರಾರಂಭಿಸಲಾಗುತ್ತಿಲ್ಲ. ಮುಂದಿನ ವರ್ಷದಲ್ಲಿ ವಿದ್ಯಾರ್ಥಿಗಳ ಸಂಖ್ಯೆ, ಜಮೀನಿನ ಲಭ್ಯತೆ ಹಾಗೂ ಅನುದಾನದ ಲಭ್ಯತೆ ಇವುಗಳನ್ನು ಆಧರಿಸಿ ಬೆಳಗಾವಿ ಜಿಲ್ಲೆ ಚಿಕ್ಕೋಡಿ ತಾಲ್ಲೂಕಿನ ಮಜಲಹಟ್ಟಿ ಗ್ರಾಮದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.